ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಶಾಲೆಯಿಂದ ಹೊರಗುಳಿದ ಮಕ್ಕಳ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):-

843 (841) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಾಥಮಿಕ ಕಡ್ಡಾಯ ಶಿಕ್ಷಣ ಪಡೆಯದೆ ಶಾಲಾ ಶಿಕ್ಷಣ ಮುಖ್ಯವಾಹಿನಿಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಶಾಲೆಯಿಂದ ಹೊರಗುಳಿದ ಮಕ್ಕಳ ಶಿಕ್ಷಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಭಿಕ್ಷುಕರ ಮಕ್ಕಳು, ಅಲೆಮಾರಿಗಳ ಮಕ್ಕಳು, ಅನಾಥ ಮಕ್ಕಳ ಶಿಕ್ಷಣಕ್ಕೆ ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ;

(ಈ) ಮೊಹಲ್ಲಾ ಶಾಲೆ, ಬಸ್ ನಿಲ್ದಾಣ ಶಾಲೆ, ಮಕ್ಕಳಿದ್ದಲೇ ಶಾಲೆ ಮುಂತಾದ ವಿನೂತನ ನವೀನ ಕಾರ್ಯಕ್ರಮಗಳನ್ನು ಕೈಗೊಂಡು ರಾಜ್ಯದ ಎಲ್ಲ ಮಕ್ಕಳಿಗೂ ಶಿಕ್ಷಣ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ?